☎ Ph : 2768 3377

# ೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

೦. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

ಸಂ. ಬಿಐಎಎಪಿಎ/ಟಿಪಿ01/ಎಲ್‌ಎಒ/31/2017-18 /343 ದಿನಾಂಕ: 28 MAY 2018

## "ತಾತ್ಕಾಲಿಕ ಅನುಮೋದನೆ ಪತ್ರ"

ವಿಷಯ : ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸ.ನಂ 126/2 ರಲ್ಲಿ 0-23 ಗುಂಟೆ, ಸ.ನಂ 126/3 ರಲ್ಲಿ 0-33¾ ಎ:ಗು, ಒಟ್ಟು 1-16¾ ಎ:ಗು ವಿಸ್ತೀರ್ಣದಲ್ಲಿ 'ವಸತಿ' ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1) ಅರ್ಜಿದಾರರು ಸಲ್ಲಿಸಿರುವ ಅರ್ಜಿ ಸಂಖ್ಯೆ 3573 ದಿನಾಂಕ: 31/01/2018.
2) ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಎಎಲ್‌ಎನ್(ದೇ.ಕ) ಎಸ್.ಆರ್/108/2011-12, ದಿನಾಂಕ: 22/09/2012, ಎಎಲ್‌ಎನ್(ದೇ.ಕ) ಎಸ್.ಆರ್/115/2014-15, ದಿನಾಂಕ: 06/10/2015.
3) ಸರ್ಕಾರದ ಅಧಿಸೂಚನೆ ಸಂಖ್ಯೆ : ಸಂವ್ಯಶಾಇ 24 ಶಾಸನ 2015, ಬೆಂಗಳೂರು ದಿನಾಂಕ: 10-09-2015
4) ದಿನಾಂಕ: 24/02/2018 ರಂದು ನಡೆದ ಪ್ರಾಧಿಕಾರದ 121 ನೇ ಸಭೆಯ ವಿಷಯ ಸಂ. 121 [04(06)] ರ ಬಗ್ಗೆ ಕೈಗೊಂಡ ನಿರ್ಣಯ.
5) ಈ ಪ್ರಾಧಿಕಾರದ ಸಮ ಸಂಖ್ಯೆಯ ಪತ್ರ ದಿನಾಂಕ: 05/04/2018
6) ಅರ್ಜಿದಾರರು ಹಣ ಸಂದಾಯ ರಶೀದಿ ಸಂಖ್ಯೆ: 8994, ದಿನಾಂಕ: 25/05/2018 ರಂತೆ ರೂ, 2,60,000/- (ಎರಡು ಲಕ್ಷದ ಅರವತ್ತು ಸಾವಿರ ರೂಗಳನ್ನು ಮಾತ್ರ) ರಂತೆ ಶುಲ್ಕಗಳನ್ನು ಪಾವತಿಸಿರುತ್ತಾರೆ.

*********

ವಿಷಯಕ್ಕೆ ಸಂಬಂಧಿಸಿದಂತೆ, ಮೆ॥ ಶ್ರೀ ಕೃಷ್ಣ ಪ್ರೊಜೆಕ್ಟ್ಸ್‌ರವರ ಪರವಾಗಿ ಪಾಲುದಾರರಾದ ಶ್ರೀ ದಯಾಕರ್ ರೆಡ್ಡಿ ಮುರಮ್ ರೆಡ್ಡಿ ಮತ್ತು ಶ್ರೀ ಪ್ರದೀಪ್ ದೇವರಗುಂಡ ಕುಶಾಲಪ್ಪ ಇವರು ಉಲ್ಲೇಖ (1) ರಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ದೇವನಹಳ್ಳಿ ಗ್ರಾಮದ ಸ.ನಂ 126/2 ರಲ್ಲಿ 0-23 ಗುಂಟೆ, ಸ.ನಂ 126/3 ರಲ್ಲಿ 0-33¾ ಎ:ಗು, ಒಟ್ಟು 1-16¾ ಎ:ಗು ವಿಸ್ತೀರ್ಣದ ಪ್ರದೇಶಕ್ಕೆ 'ವಸತಿ' ವಿನ್ಯಾಸಕ್ಕೆ ಅನುಮೋದನೆಗಾಗಿ ಅರ್ಜಿ ಸಲ್ಲಿಸಿರುತ್ತಾರೆ.

ಈ ಸಂಬಂಧ ಪರಿಶೀಲಿಸಲಾಗಿ, ಸರ್ಕಾರದಿಂದ ಅನುಮೋದನೆಯಾಗಿರುವ ಮಹಾಯೋಜನೆ - 2021 ರಂತೆ ಪ್ರಶ್ನಿತ ಜಮೀನುಗಳನ್ನು ವಸತಿ ವಲಯ ದಲ್ಲಿ ಕಾಯ್ದಿರಿಸಲಾಗಿದ್ದು, ಉಲ್ಲೇಖ (2) ರಂತೆ ಕಂದಾಯ ಇಲಾಖೆಯ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು "ವಾಸದ" ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡಿ ಅಧಿಕೃತ ಜ್ಞಾಪನ ಪತ್ರಗಳ ಮೂಲಕ ಆದೇಶ ಹೊರಡಿಸಿರುತ್ತಾರೆ.

ಸದರಿ ವಸತಿ ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (4) ರಂತೆ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಲಾಗಿದ್ದು, ಉಲ್ಲೇಖ (3) ರ ಸರ್ಕಾರದ ಅಧಿಸೂಚನೆಯಂತೆ ಕರ್ನಾಟಕ

ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಸೆಕ್ಷನ್ 17 (2) ರನ್ವಯ ತಾತ್ಕಾಲಿಕ ಅನುಮೋದನೆ ನೀಡಲು ನಿರ್ಣಯಿಸಿದೆ.

ಉಲ್ಲೇಖ (5) ರ ಈ ಪ್ರಾಧಿಕಾರದ ಪತ್ರದಲ್ಲಿ ಅರ್ಜಿದಾರರಿಗೆ ನಿಗಧಿತ ಶುಲ್ಕಪಾವತಿಸಲು ಸೂಚಿಸಲಾಗಿದ್ದು, ಅರ್ಜಿದಾರರು ಉಲ್ಲೇಖ (6) ರಂತೆ ಈ ಪ್ರಾಧಿಕಾರಕ್ಕೆ ಶುಲ್ಕಗಳನ್ನು ಪಾವತಿಸಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಕೋರಿರುತ್ತಾರೆ.

ಆದ ಕಾರಣ, ಮೇಲ್ಕಂಡ ಅಂಶಗಳನ್ವಯ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ಗ್ರಾಮದ ಸ.ನಂ 126/2 ರಲ್ಲಿ 0–23 ಗುಂಟೆ, ಸ.ನಂ 126/3 ರಲ್ಲಿ 0–33¾ ಎ:ಗು, ಒಟ್ಟು 1–16¾ ಎ:ಗು ವಿಸ್ತೀರ್ಣದ ಪ್ರದೇಶಕ್ಕೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27–01–2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29–01–2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅನುಮೋದನೆಗೊಂಡಿರುವ ಮಹಾಯೋಜನೆಯ ವಲಯ ನಿಯಮಾವಳಿಗಳನ್ವಯ ಮತ್ತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2) ರನ್ವಯ ವಸತಿ ವಿನ್ಯಾಸ ನಕ್ಷೆಗೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು **"ತಾತ್ಕಾಲಿಕ ಅನುಮೋದನೆ"** ನೀಡಲಾಗಿದೆ.

1. ಈ ವಿನ್ಯಾಸವನ್ನು ಅಭಿವೃದ್ಧಿಪಡಿಸಲು ಮಾತ್ರ ಅನುಮೋದನೆ ನೀಡಲಾಗಿದೆ.
2. ಅನುಮೋದನೆ ನೀಡಿದ ದಿನಾಂಕದಿಂದ ಎರಡು ವರ್ಷದೊಳಗೆ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸತಕ್ಕದ್ದು. ತಪ್ಪಿದಲ್ಲಿ ತಾತ್ಕಾಲಿಕ ಅನುಮೋದನೆಯನ್ನು ನವೀಕರಿಸಿಕೊಳ್ಳತಕ್ಕದ್ದು.
3. ವಿನ್ಯಾಸದಲ್ಲಿ ಎಲ್ಲಾ ಸಿವಿಲ್ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ನೀರಿನ ಸಂಪರ್ಕ ಹಾಗೂ ಇತರೆ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಲೋಕೋಪಯೋಗಿ ಒಳನಾಡು ಬಂದರು ಮತ್ತು ಜಲಸಾರಿಗೆ ಇಲಾಖೆ, ತೋಟಗಾರಿಕೆ ಇಲಾಖೆ, ಬೆಸ್ಕಾಂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (KUWSDB) ಮತ್ತು ಸ್ಥಳೀಯ ಸಂಸ್ಥೆಯಿಂದ ದೃಢೀಕರಣ ಪತ್ರ ಪಡೆದು ಸಲ್ಲಿಸತಕ್ಕದ್ದು.
4. ವಿನ್ಯಾಸದಲ್ಲಿ ಕಾಯ್ದಿರಿಸಿರುವ ಉದ್ಯಾನವನ ಪ್ರದೇಶಕ್ಕೆ Chain Link Fencing ಅಳವಡಿಸಿ ಉದ್ಯಾನವನವನ್ನು ಅಭಿವೃದ್ಧಿಪಡಿಸಿ ತೋಟಗಾರಿಕೆ ಇಲಾಖೆಯಿಂದ ದೃಢೀಕರಣ ಪತ್ರ ಸಲ್ಲಿಸತಕ್ಕದ್ದು ಹಾಗೂ ನಾಗರೀಕ ಸೌಲಭ್ಯ ನಿವೇಶನಕ್ಕೂ ಸಹ Chain Link Fencing ಅನ್ನು ಅಳವಡಿಸಿ ಸಂರಕ್ಷಿಸತಕ್ಕದ್ದು. ಹಾಗೂ ಸದರಿ ವಸತಿ ವಿನ್ಯಾಸದಲ್ಲಿ ಕಾಯ್ದಿರಿಸಲಾದ ಉದ್ಯಾನವನ ಮತ್ತು ರಸ್ತೆ ಪ್ರದೇಶಗಳನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗೆ ಹಾಗೂ ನಾಗರೀಕ ಸೌಲಭ್ಯ ನಿವೇಶನವನ್ನು ಈ ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಾಜನಾ ಪತ್ರಗಳ ಮೂಲಕ ಹಸ್ತಾಂತರಿಸತಕ್ಕದ್ದು.
5. ಪ್ರಸ್ತಾಪಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯ ಒಳಚರಂಡಿ ನೀರು ಶುದ್ಧೀಕರಣ ಘಟಕ (STP) ವನ್ನು ವಿನ್ಯಾಸದಲ್ಲಿ ನಿರ್ಮಾಣ ಮಾಡತಕ್ಕದ್ದು.
6. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
7. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸುವುದು.

☎ Ph : 2768 3377

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

8. ಅನುಮೋದಿತ ವಿನ್ಯಾಸದ ಸೂಕ್ತ ಸ್ಥಳಗಳಲ್ಲಿ (RWH) ಮಳೆ ನೀರು ಸಂಗ್ರಹಣೆ ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸಿ ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
9. ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ನಿವೇಶನವನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.
10. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.
11. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ವಿಧಿ 17 (4) ರಂತೆ ಕ್ರಮ ಜರುಗಿಸಲಾಗುವುದು.
12. ಪ್ರಸ್ತಾಪಿತ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.
13. ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು.
14. ಸದರಿ ವಸತಿ ವಿನ್ಯಾಸದಲ್ಲಿ ಹಾಲಿ ಸ್ಥಳದ್ದಿರುವಂತೆ ಸೂಚಿಸಲಾದ ಎಲ್‌ಟಿ ವಿದ್ಯುತ್ ತಂತಿಯನ್ನು ಸೂಕ್ತ ರಸ್ತೆ ಪರಿಚಲನೆಯಲ್ಲಿ ಅಳವಡಿಸತಕ್ಕದ್ದು.
15. ಈ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಅತಿಕ್ರಮಣ ಮಾಡಬಾರದು ಮತ್ತು ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ.
16. ಸದರಿ ವಿನ್ಯಾಸದಲ್ಲಿನ ರಸ್ತೆ, ಪಾದಚಾರಿ ಮಾರ್ಗ ಹಾಗೂ ಉದ್ಯಾನವನಗಳು ಸಾರ್ವಜನಿಕ ಸ್ವತ್ತಾಗಿರುತ್ತದೆ. ಆದ್ದರಿಂದ ಸಾರ್ವಜನಿಕ ಸ್ವತ್ತುಗಳನ್ನು ಮುಕ್ತವಾಗಿಡತಕ್ಕದ್ದು.
17. ಆರ್ಥಿಕವಾಗಿರುವ ದುರ್ಬಲರಾಗಿರುವ ಮತ್ತು ಕಡಿಮೆ ಆದಾಯದ ವರ್ಗದವರಿಗೆ ನಿವೇಶನ ಹಾಗೂ ಮನೆಗಳನ್ನು ಮೀಸಲಿಡುವ ಕುರಿತು ದಾಖಲಾಗಿರುವ ರಿಟ್ ಪಿಟಿಷನ್ ಸಂಖ್ಯೆ 9800/2015 (LB-RES) ಗೆ ಸಂಬಂಧಿಸಿದಂತೆ ನ್ಯಾಯಾಲಯವು ಹೊರಡಿಸುವ ಅಂತಿಮ ತೀರ್ಪಿಗೆ ಬದ್ಧರಾಗಿರತಕ್ಕದ್ದು.
18. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಇಲಾಖೆಗಳು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಪ್ರಾಧಿಕಾರದಿಂದ ನೀಡಿದ ಅನುಮೋದನೆಯು ಯಾವ ಪೂರ್ವ ಸೂಚನೆಯು ಇಲ್ಲದೇ ತಂತಾನೇ ರದ್ದಾಗುತ್ತದೆ.

ಅರ್ಜಿದಾರರು ವಿನ್ಯಾಸದಲ್ಲಿನ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಿದ ನಂತರ, ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ವಿವಿಧ ಇಲಾಖೆಗಳಿಂದ ಅಂದರೆ ರಸ್ತೆ ಮತ್ತು ಮಳೆ ನೀರು ಚರಂಡಿ ಅಭಿವೃದ್ಧಿಪಡಿಸಿರುವ ಬಗ್ಗೆ ಲೋಕೋಪಯೋಗಿ ಇಲಾಖೆಯಿಂದ, ವಿದ್ಯುತ್ ಸರಬರಾಜು ಮಾಡಿರುವ ಬಗ್ಗೆ ಬೆಸ್ಕಾಂನಿಂದ, ಉದ್ಯಾನವನ ಅಭಿವೃದ್ಧಿಪಡಿಸಿರುವ ಬಗ್ಗೆ ತೋಟಗಾರಿಕೆ ಇಲಾಖೆಯಿಂದ

ಮತ್ತು ನೀರು ಸರಬರಾಜು ಮತ್ತು ಒಳಚರಂಡಿ ಒಳಗೊಂಡಂತೆ ಕಾಮಗಾರಿ ಪೂರ್ಣಗೊಳಿಸಿರುವ ಬಗ್ಗೆ KUWSDB ಇಲಾಖೆಯಿಂದ ಮತ್ತು ಎಲ್ಲಾ ಕಾಮಗಾರಿಗಳ ಸ್ಥಳೀಯ ಸಂಸ್ಥೆಯಿಂದ ಪ್ರಮಾಣ ಪತ್ರ ಹಾಗೂ ವಿನ್ಯಾಸದಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಸಾರ್ವಜನಿಕ ಪ್ರದೇಶಗಳ ನಿರ್ವಹಣೆ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಕಾಮಗಾರಿ ಮುಕ್ತಾಯ ಪತ್ರವನ್ನು ಪಡೆದು ಸಲ್ಲಿಸಿ, ವಿನ್ಯಾಸ ನಕ್ಷೆ ಅಂತಿಮ ಅನುಮೋದನೆ ಹಾಗೂ ನಿವೇಶನ ಬಿಡುಗಡೆಗೆ ಮನವಿ ಸಲ್ಲಿಸತಕ್ಕದ್ದು.

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ**
**ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.

ಇವರಿಗೆ :
ಮೆ॥ ಶ್ರೀ ಕೃಷ್ಣ ಪ್ರೊಜೆಕ್ಟ್ಸ್ ರವರ ಪರವಾಗಿ ಪಾಲುದಾರರು
ಶ್ರೀ ದಯಾಕರ್ ರೆಡ್ಡಿ ಮುರಮ್ ರೆಡ್ಡಿ ಮತ್ತು
ಶ್ರೀ ಪ್ರದೀಪ್ ದೇವರಗುಂಡ ಕುಶಾಲಪ್ಪ,
ನಂ.92, 8 ನೇ ಅಡ್ಡ ರಸ್ತೆ
"ಜಿ"ಬ್ಲಾಕ್, ಸಹಕಾರ ನಗರ
ಬೆಂಗಳೂರು–92